ಬದಲಾದ ಜೀವನ ವಿಧಾನ ಹಾಗೂ ಆಧುನಿಕ ಆಹಾರ ಪದ್ಧತಿಯಿಂದಾಗಿ ಇತ್ತೀಚಿನ ದಿನಗಳಲ್ಲಿ ಮಧ್ಯ ವಯಸ್ಸಿನಲ್ಲಿಯೇ ಅನಾರೋಗ್ಯ ಸಮಸ್ಯೆಗಳು ಕಾಡಲಾರಂಭಿಸಿವೆ. ಯುವಜನರು ಕೂಡ ಆರೋಗ್ಯ ಕಡೆಗಣಿಸಿ, ಸಮಸ್ಯೆ ತಂದೊಡ್ಡಿಕೊಳ್ಳುತ್ತಿದ್ದಾರೆ. ಆರೋಗ್ಯವಂತರಾಗಿರಲು ನಾವು ಉತ್ತಮ ಜೀವನಶೈಲಿಯನ್ನು ರೂಢಿಸಿಕೊಳ್ಳಬೇಕಾಗಿದೆ. ಸತ್ವಯುತ ಆಹಾರ ಮತ್ತು ನಿಯಮಿತ ವ್ಯಾಯಾಮದಿಂದ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ಮನಸ್ಸಿನ ಕಾಯಿಲೆಗಳು ದೈಹಿಕ ಆರೋಗ್ಯದ ಮೇಲೆಯೂ, ದೇಹದ ಕಾಯಿಲೆಗಳು ಮನಸ್ಸಿನ ಆರೋಗ್ಯದ ಮೇಲೆಯೂ ಪ್ರಭಾವ ಬೀರುತ್ತವೆ. ಕೋವಿಡ್ ಕಾಣಿಸಿಕೊಂಡ ಬಳಿಕ ಆರೋಗ್ಯದ ಮಹತ್ವ ಅರಿವಿಗೆ ಬಂದಿದೆ. ಬಹುತೇಕ ಕೊರೊನಾ ಸೋಂಕಿತರಿಗೆ 'ಆಯುಷ್ಮಾನ್ ಭಾರತ–ಆರೋಗ್ಯ ಕರ್ನಾಟಕ' ಯೋಜನೆಯಡಿ ಸರ್ಕಾರಿ ವ್ಯವಸ್ಥೆಯಡಿಯಲ್ಲಿಯೇ ಚಿಕಿತ್ಸೆ ಒದಗಿಸುವ ಜತೆಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಮೂಲಸೌಕರ್ಯ ವೃದ್ಧಿಸಲಾಗಿದೆ.

ಎರಡು ವರ್ಷಗಳ ಹಿಂದೆ ಕಾಣಿಸಿಕೊಂಡ ಕೋವಿಡ್‌ನಿಂದಾಗಿ ಇಡೀ ವಿಶ್ವವೇ ತತ್ತರಿಸಿ ಹೋಗಿತ್ತು. ಸಾಂಕ್ರಾಮಿಕ ರೋಗದಿಂದ ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿತ್ತು. ಸೋಂಕು ಶಂಕಿತರ ತಪಾಸಣೆ, ಪರೀಕ್ಷೆಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಬಳಸಿಕೊಂಡು, ಮೇಲ್ದರ್ಜೆಗೆ ಏರಿಸಲಾಯಿತು. ಕೇಂದ್ರ ಸರ್ಕಾರವು ವಿಜ್ಞಾನಿಗಳಿಗೆ ನೀಡಿದ ಪ್ರೋತ್ಸಾಹದಿಂದ ಈ ವೈರಾಣು ಕಾಣಿಸಿಕೊಂಡ ಒಂದು ವರ್ಷದಲ್ಲಿಯೇ ದೇಶದಲ್ಲಿ ಲಸಿಕೆಯನ್ನು ಸಂಶೋಧಿಸಿ, ವಿದೇಶಗಳಿಗೂ ನೀಡಲಾಯಿತು. ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಿಂದಾಗಿ ಗ್ರಾಮೀಣ ಪ್ರದೇಶಗಳಲ್ಲಿ ಕೋವಿಡ್ ನಡುವೆಯೂ ಕೋವಿಡೇತರ ಚಿಕಿತ್ಸೆಗಳು ಸುಲಭವಾಗಿ ಒದಗಿಸಲು ಸಾಧ್ಯವಾಯಿತು.

ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ 'ಸಂಪೂರ್ಣ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಯೋಗಕ್ಷೇಮವವೇ ಆರೋಗ್ಯ'. ನಮ್ಮ ಮೇಲೆ ದಾಳಿ ನಡೆಸುವ ವೈರಾಣುಗಳು ದೈಹಿಕ ಮತ್ತು ಮಾನಸಿಕ ಯೋಗಕ್ಷೇಮಕ್ಕೆ ಹೇಗೆ ಅಡ್ಡಿಯಾಗುತ್ತವೆ ಎಂಬುದು ಕಳೆದ ಎರಡು ವರ್ಷಗಳಲ್ಲಿ ಎಲ್ಲರ ಅರಿವಿಗೆ ಬಂದಿದೆ. ಆದ್ದರಿಂದ ಮನುಷ್ಯ ಆರೋಗ್ಯಪೂರ್ಣವಾಗಿ ಬಾಳುವುದು ಹಾಗೂ ರೋಗನಿರೋಧಕ ಶಕ್ತಿಯನ್ನು ವೃದ್ಧಿಸುವುದು ಬಹಳ ಮುಖ್ಯವಾಗಿರುತ್ತದೆ.

ಇತ್ತೀಚೆಗೆ ಸರ್ಕಾರವೂ ರಾಷ್ಟ್ರ ಅಥವಾ ರಾಜ್ಯದ ಜನರ ಸಾಮಾಜಿಕ, ಆಧ್ಯಾತ್ಮಿಕ ಯೋಗಕ್ಷೇಮ ಉತ್ತಮಗೊಳಿಸಲು ಆರೋಗ್ಯ ಕೇಂದ್ರಗಳಿಂದ ಅನೇಕ ಸೇವೆಗಳ ಮೂಲಕ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಕೆಲವು ವರ್ಷಗಳ ಹಿಂದೆ ಸರ್ಕಾರವು ದೇಶದ ನಾನಾ ಭಾಗಗಳಲ್ಲಿ ಜನರ ಜೀವನ ಕ್ರಮ, ಮಾರಕ ರೋಗಗಳು ಮತ್ತು ಶೀಘ್ರ ಗುಣಪಡಿಸಬಹುದಾದ ವ್ಯಾಧಿಗಳನ್ನು ಪಟ್ಟಿಮಾಡಿತು. ಕಡಿಮೆ ವೆಚ್ಚದಲ್ಲಿ ಉತ್ತಮ



ಆರೋಗ್ಯ ಸೌಕರ್ಯಗಳನ್ನು ಹೇಗೆ ಜನರಿಗೆ ತಲುಪಿಸಬಹುದು ಎಂಬುದನ್ನು ಚಿಂತಿಸಿ, ತಜ್ಞರ ಸಲಹೆ ಅನುಸಾರ ಎಲ್ಲರಿಗೂ ಎಲ್ಲ ಕಾಲಕ್ಕೂ ಸಲ್ಲುವ ಆರೋಗ್ಯ ಸೇವೆ ಜಾರಿಗೆ ತರಲು ಯೋಜನೆ ರೂಪಿಸಿತು. ಅದರಿಂದಾಗಿಯೇ 2018ರ ಮಾರ್ಚ್ ತಿಂಗಳಲ್ಲಿ 'ಆಯುಷ್ಮಾನ್ ಭಾರತ್' ಎಂಬ ಯೋಜನೆಯನ್ನು ಘೋಷಿಸಿ, ಜಾರಿ ಮಾಡಲಾಯಿತು.

ವಿಶ್ವದ ಅತಿದೊಡ್ಡ ಆರೋಗ್ಯ ರಕ್ಷಾ ಕವಚವಾಗಿರುವ 'ಆಯುಷ್ಮಾನ್ ಭಾರತ್' ಯೋಜನೆ ದೇಶದ ಜನತೆ ಪಾಲಿಗೆ ಜೀವ ಸಂಜೀವಿನಿಯಾಗಿದೆ. ಎಲ್ಲ ವಯೋಮಾನದವರು ಇದರ ಲಾಭ ಪಡೆದುಕೊಳ್ಳಬಹುದಾಗಿದೆ. ಸರ್ಕಾರಿ ಆಸ್ಪತ್ರೆಯಲ್ಲಿಯೇ ಗುಣಮಟ್ಟದ ಸೇವೆ ಒದಗಿಸುತ್ತಿದ್ದು, ಒಂದು ವೇಳೆ ಸೇವೆ ಲಭ್ಯವಿರದಿದ್ದಲ್ಲಿ ಖಾಸಗಿ ಆಸ್ಪತ್ರೆಗಳಿಗೆ ರೆಫರಲ್ ಆಧಾರದ ಮೇಲೆ ಕಳಿಸಲಾಗುತ್ತದೆ.

ಮೊದಲ ವಿಭಾಗದಲ್ಲಿ 1.50 ಲಕ್ಷ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳನ್ನು ನಿರ್ಮಿಸುವ ಗುರಿ ಹಾಕಿಕೊಳ್ಳಲಾಗಿದೆ. ಎಲ್ಲ ಸಮುದಾಯಗಳಿಗೂ ಉಚಿತವಾಗಿ ಆರೋಗ್ಯ ಸೇವೆಗಳನ್ನು ನೀಡಲು ಗಮನಹರಿಸುವುದು ಮತ್ತು ಅಗತ್ಯ ಸೇವೆಗಳನ್ನು ಹೆಚ್ಚಿಸುವುದು ಮೂಲ ಆಶಯವಾಗಿದೆ.

ಎರಡನೇ ವಿಭಾಗದಲ್ಲಿ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ಮೂಲಕ ದ್ವಿತೀಯ ಮತ್ತು ತೃತೀಯ ಹಂತದ ಆರೋಗ್ಯ ರಕ್ಷಣೆ ನೀಡಲು 10 ಕೋಟಿಗೂ ಹೆಚ್ಚು ಬಡ ಮತ್ತು ದುರ್ಬಲ ಕುಟುಂಬಗಳಿಗೆ ವರ್ಷಕ್ಕೆ ತಲಾ ₹ 5 ಲಕ್ಷದವರೆಗೆ ಆರೋಗ್ಯ ವಿಮೆಯನ್ನು ಒದಗಿಸಲಾಗುತ್ತಿದೆ. ಕರ್ನಾಟಕದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಕೇಂದ್ರ 'ಆಯುಷ್ಮಾನ್ ಭಾರತ್' ಯೋಜನೆಗೆ ಪೂರ್ಣ ಸಹಕಾರ ನೀಡಿದ್ದು, 2020–21ನೇ ಸಾಲಿನಲ್ಲಿ ಈ ಯೋಜನೆಯಡಿ ಆರೋಗ್ಯ ಮತ್ತು ಕ್ಷೇಮ ಕೇಂದ್ರ (ಎಚ್‌ಡಬ್ಲ್ಯುಸಿ) ಸ್ಥಾಪಿಸುವಲ್ಲಿ ಕರ್ನಾಟಕವು ದೇಶಕ್ಕೆ ಪ್ರಥಮ ಸ್ಥಾನದಲ್ಲಿದೆ. ಗ್ರಾಮೀಣ ಪ್ರದೇಶಗಳಲ್ಲಿ ಸಮಗ್ರ ಆರೋಗ್ಯ ಸೇವೆ ಒದಗಿಸಲು ಎಚ್‌ಡಬ್ಲ್ಯುಸಿ ಸ್ಥಾಪಿಸಲಾಗಿದೆ.

ಬಿಪಿಎಲ್ ಪಡಿತರ ಕಾರ್ಡ್ ಹೊಂದಿದವರು ಹಾಗೂ ರಾಷ್ಟ್ರೀಯ ಸ್ವಾಸ್ಥ್ಯವಿಮೆ ಯೋಜನೆಯಡಿ ನೋಂದಾಯಿಸಿಕೊಂಡವರು ಆಯುಷ್ಮಾನ್ ಭಾರತ್ ಯೋಜನೆಯ ಫಲಾನುಭವಿಗಳಾಗಿದ್ದು, ವರ್ಷಕ್ಕೆ ₹ 5 ಲಕ್ಷದವರೆಗೆ ಉಚಿತ ಚಿಕಿತ್ಸೆ ನೀಡಲಾಗುತ್ತಿದೆ. ರಾಜ್ಯದಲ್ಲಿ ಉಳಿದ ಕುಟುಂಬಗಳು 'ಆರೋಗ್ಯ ಕರ್ನಾಟಕ' ಯೋಜನೆಯಡಿ ಸರ್ಕಾರಿ ಹಾಗೂ ರೆಫರಲ್ ಆಧಾರಿತ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿವೆ.

ಹೃದಯರೋಗ, ಕ್ಯಾನ್ಸರ್, ನರರೋಗ, ಮೂತ್ರಪಿಂಡ ಸಮಸ್ಯೆ ಸೇರಿದಂತೆ ವಿವಿಧ ಮಾರಣಾಂತಿಕ ಕಾಯಿಲೆಗಳಿಗೂ ಬಡ, ಮಧ್ಯಮ ವರ್ಗದವರಿಗೆ ಗುಣಮಟ್ಟದ ಚಿಕಿತ್ಸೆ ಸಿಗಬೇಕೆನ್ನುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ.

ಯೋಜನೆಯಡಿ ಎಲ್ಲರಿಗೂ ಉತ್ತಮ ಆರೋಗ್ಯ ಕಲ್ಪಿಸುವ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಉತ್ತಮ ಆರೋಗ್ಯದ ಕುರಿತು ರೋಗಿಗೆ ಅರಿವು ಮೂಡಿಸುವ, ರೋಗ ಕಂಡುಹಿಡಿದು ಚಿಕಿತ್ಸೆ ನೀಡುವ ಮತ್ತು ಅಪಘಾತ ಸಂದರ್ಭದಲ್ಲಿ ತುರ್ತು ಸೇವೆ ನೀಡುವ, ದೀರ್ಘಾವಧಿ ರೋಗಗಳ ಆರೈಕೆ ಮಾಡುವ ಕ್ರಮಗಳನ್ನು ಯೋಜನೆ ಒಳಗೊಂಡಿದೆ. ಯೋಜನೆಯಡಿ ಎರಡು ವಿಭಾಗಗಳನ್ನು ರೂಪಿಸಿ, ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.

### ಆರೋಗ್ಯ ರಕ್ಷಣೆಗೆ 'ಕ್ಷೇಮ ಕೇಂದ್ರ'ಗಳು

'ಆಯುಷ್ಮಾನ್ ಭಾರತ್' ಯೋಜನೆಯ ಭಾಗವಾಗಿ ನಿರ್ಮಾಣವಾಗಿರುವ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು ತಾಯಿ ಮತ್ತು ಮಕ್ಕಳ ಆರೋಗ್ಯ ರಕ್ಷಣಾ ಸೇವೆಗಳು, ಆರೋಗ್ಯಕರ ಜೀವನ ಶೈಲಿ ಬಗ್ಗೆ ಅರಿವು, ಅಸಾಂಕ್ರಾಮಿಕರೋಗಗಳ ನಿಯಂತ್ರಣ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿವೆ. ಅಸಾಂಕ್ರಾಮಿಕ ರೋಗಿಗಳಿಗೆ, ಇತರ ರೋಗಿಗಳಿಗೆ ಆರೈಕೆ ಮತ್ತು ಚಿಕಿತ್ಸೆ ನೀಡಲಾಗುತ್ತಿದೆ. ಕಣ್ಣು, ಕಿವಿ, ಮೂಗು, ಗಂಟಲು ರೋಗಗಳಿಗೆ ಮೊದಲ ಹಂತದ ಚಿಕಿತ್ಸೆ ಒದಗಿಸಲಾಗುತ್ತದೆ.

ಮಾನಸಿಕ ಅಸ್ವಸ್ಥರಿಗೆ ಮೊದಲ ಹಂತದ ಆರೈಕೆ, ಅಪಘಾತಕ್ಕೊಳಪಟ್ಟವರಿಗೆ, ತುರ್ತುಸ್ಥಿತಿ

ಆಯುಷ್ಮಾನ್ ಭಾರತ್ ಯೋಜನೆ...! ಕರ್ನಾಟಕ ನಂಬರ್ 1